# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗ,

## ವಾರ್ಡ್ ನಂ.40, ದೊಡ್ಡಬಿದರಕಲ್ಲು, ಕರಿಹೋಬನಹಳ್ಳಿ, ಬೆಂಗಳೂರು-5600 58.

---

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.40ರಲ್ಲಿ ದಿನಾಂಕ:15.05.2021 ರಂದು ಬೆಳಿಗ್ಗೆ 11.30 ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಚರ್ಚಿಸಲಾದ ವಿಷಯಗಳು.**

**ಈ ಕೆಳಕಂಡ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ ಸುಬ್ರಮಣ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ ಜಿ.ನಾಗಭೂಷಣ್, ಸಹಾಯಕ ಅಭಿಯಂತರರು ಮತ್ತು ಸದಸ್ಯ ಕಾರ್ಯದರ್ಶಿ.
3. ಶ್ರೀ ಮುತ್ತೇಗೌಡ.ವಿ, ಕಿರಿಯ ಆರೋಗ್ಯ ಪರಿವೀಕ್ಷಕರು.
4. ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ಸರ್ಕಾರಿ ಆಸ್ಪತ್ರೆ, ತಿಪ್ಪೇನಹಳ್ಳಿ.

- ವಾರ್ಡ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರ ತಿಪ್ಪೇನಹಳ್ಳಿಯಲ್ಲಿ ಎಲ್ಲಾ ಕೋವಿಡ್ ರೋಗಿಗಳಿಗೆ ಉಚಿತವಾಗಿ ಔಷಧ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಶ್ರೀ ಚಂದ್ರಶೇಖರ್.ಎಂ ರವರು ತಿಳಿಸಿದರು.
- ಪ್ರತೀ ದಿನ ವಾರ್ಡ ವ್ಯಾಪ್ತಿಯ, ತಿಪ್ಪೇನಹಳ್ಳಿಯ ಸಮುದಾಯ ಭವನದಲ್ಲಿ ಸುಮಾರು 150 ಕ್ಕೂ ಹೆಚ್ಚು ಜನರಿಗೆ ಕೋವಿಡ್ ತಪಾಸಣೆ ನಡೆಸಲಾಗುತ್ತಿದೆ ಎಂದು ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ರವರು ತಿಳಿಸಿದರು.
- ವಾರ್ಡ ವ್ಯಾಪ್ತಿಯ ವಿದ್ಯಮಾನ್ಯ ನಗರ ವೆಂಕಟೇಶ್ವರ ದೇವಸ್ಥಾನ ಮತ್ತು ತಿಪ್ಪೇನಹಳ್ಳಿ ಸಮುದಾಯ ಭವನದಲ್ಲಿ ಲಭ್ಯವಿರುವಷ್ಟು ಕೋವಿಶೀಲ್ಡ್ ವ್ಯಾಕ್ಸೀನ್‌ಗಳನ್ನು ನೀಡಲಾಗುತ್ತಿದೆ ಎಂದು ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ರವರು ತಿಳಿಸಿದರು.
- ಕೋವಿಡ್ ಪಾಸಿಟಿವ್ ದೃಢೀಕೃತಗೊಂಡ ರೋಗಿಗಳನ್ನು ಸಾಗಿಸಲು 2 ಅಂಬುಲೆನ್ಸ್ ವ್ಯವಸ್ಥೆ ಒದಗಿಸಲಾಗಿದೆ ಎಂದು ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ರವರು ತಿಳಿಸಿದರು.
- ವ್ಯಾಕ್ಸೀನೇಷನ್ ಸಂದರ್ಭದಲ್ಲಿ ಏನಾದರೂ ತೊಂದರೆ ಉಂಟಾದಲ್ಲಿ ಶ್ರೀ ಲಕ್ಷ್ಮೀ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ಸುಂಕದಕಟ್ಟೆಯಲ್ಲಿ 10 ಬೆಡ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ರವರು ತಿಳಿಸಿದರು.

- ಆಶಾ ಕಾರ್ಯಕರ್ತೆಯರಿಂದ ಎಲ್ಲಾ ಕೋವಿಡ್ ಸೊಂಕು ದೇಢಪಟ್ಟ ರೋಗಿಗಳನ್ನು ದೂರವಾಣಿ ಮೂಲಕ ಸಂಪರ್ಕಿಸಿ ಅವರ ಸಂಭದೀಕರ ವಿವರಗಳನ್ನು ಪಡೆಯಲು ಕ್ರಮ ಜರುಗಿಸಲಾಗಿದೆ ಎಂದು ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ರವರು ತಿಳಿಸಿದರು.
- ಕೋವಿಡ್ ಸೊಂಕು ದೃಢಪಟ್ಟ ಎಲ್ಲಾ ರೋಗಿಗಳ ಕುಟುಂಬದ ಎಲ್ಲಾ ಸದಸ್ಯರಿಗೂ ಕಡ್ಡಾಯವಾಗಿ ಕೋವಿಡ್ ತಪಾಸಣೆ ಮಾಡಿಸುವಂತೆ ಆಶಾ ಕಾರ್ಯಕರ್ತೆಯರಿಗೆ ಸೂಚಿಸಲಾಗಿದೆ ಎಂದು ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ರವರು ತಿಳಿಸಿದರು.
- ವ್ಯಾಕ್ಸೀನೇಷನ್ ಸಂದರ್ಭದಲ್ಲಿ ಸಂಬಂಧಿಸಿದ ಗ್ರಾಮಗಳ ಎಲ್ಲಾ ಕಿರಿಯ ಮಹಿಳಾ ಸಹಾಯಕಿಯರು ಹಾಗೂ ಆಶಾ ಕಾರ್ಯಕರ್ತೆಯರಿಗೆ ಕಡ್ಡಾಯವಾಗಿ ಹಾಜಾರಿರಲು ಸೂಚಿಸಲಾಗಿದೆ ಎಂದು ಶ್ರೀ ಚಂದ್ರಶೇಖರ್.ಎಂ, ಪಿ.ಹೆಚ್.ಸಿ, ರವರು ತಿಳಿಸಿದರು.
- ದೊಡ್ಡಬಿದರಕಲ್ಲು, ವಾರ್ಡ ನಂ.40 ಕ್ಕೆ ಸಂಬಂಧಿಸಿದಂತೆ ಇಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವಂತೆ **ಟ್ರಯೇಜ್ ಸೆಂಟರ್** ಅನ್ನು ಸ್ಥಾಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತು.
- ಈ ಸಭೆಯ ನಂತರ ಕೋವಿಡ್ ವ್ಯಾಕ್ಸಿನೇಷನ್ ಸೆಂಟರ್ ಗೆ ಬೇಟಿ ನೀಡಲು ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

15/6

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.40, ದೊಡ್ಡಬಿದರಕಲ್ಲು

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.40, ದೊಡ್ಡಬಿದರಕಲ್ಲು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.